(94)
158ನೇ ಮುಟ

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ. ಬಲ್ಕೀಸ್ ಬಾನು, ಶ್ರೀ. ರಮೇಶ್ ಬಾಬು, ಎಫ್. ಹೆಚ್. ಜಕ್ಕಪ್ಪನವರ್, ಶಿವಕುಮಾರ್ ಕೆ. ಹಾಗೂ ಎ. ವಸಂತ ಕುಮಾರ್ ಇವರುಗಳು ನಿಯಮ 330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕೃಷಿ ಸಚಿವರ ಉತ್ತರ.**

**ವಿಷಯ:** ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕಾ ವಿಜ್ಞಾನ ವಿಶ್ವವಿದ್ಯಾಲಯದ 104 ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಮೀಸಲಾತಿಯನ್ನು ಉಲ್ಲಂಘಿಸಿದ್ದು, ಇದರಿಂದ ಸುಮಾರು 50 ಜನ ಎಸ್.ಸಿ/ಎಸ್.ಟಿ. ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ದಿನಾಂಕ: 30-12-2025ರಂದು ಸಂಜೆ ಸಾಗರದ ಇರುವಕ್ಕಿಯಲ್ಲಿರುವ ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಹಾಗೂ ಆಡಳಿತ ಮಂಡಳಿಯವರು ನಡೆಸಿರುವ ಅಕ್ರಮಗಳ ಬಗ್ಗೆ ಹೋರಾಟ ಮಾಡಲು ಬಂದ ಶ್ರೀಕಾಂತ್, ಚಂದ್ರಶೇಖರ್ ಟಿ., ಅರುಣ್ ಕುಮಾರ್ ಆರ್., ಕೀರ್ತಿ ಎಸ್., ಜಯಕುಮಾರ್ ಡಿ., ಇವರುಗಳನ್ನು ಸಾಗರ ತಾಲ್ಲೂಕಿನ ಎಡೆಹಳ್ಳಿ ಐಬಿ ಹತ್ತಿರ ವಾಹನದಲ್ಲಿ ಹೋಗುತ್ತಿದ್ದಾಗ ಇವರನ್ನು ಕುಲಪತಿಯವರು ತಡೆದು ಚಂದ್ರಶೇಖರ್ ಅವರನ್ನು ತಮ್ಮ ಕಾರಿನಲ್ಲಿ ಬಲವಂತವಾಗಿ ಕರೆದುಕೊಂಡು ಹೋಗಿರುವುದು ಅಲ್ಲದೆ, ಇವರನ್ನು ಬಿಡಿಸಲು ಹೋದವರಿಗೆ ಸಂಘ ಕಟ್ಟಿಕೊಂಡು ನನ್ನ ವಿರುದ್ಧ ಹೋರಾಟ ಮಾಡುತ್ತೀರಾ ಎಂದು ದಲಿತ ಸಂಘಟನೆಗಳ ವಿರುದ್ಧ ಅವಾಚ್ಯವಾಗಿ ಬೈದು ಜಾತಿ ನಿಂದನೆ ಮಾಡಿ, ಜೀವ ಬೆದರಿಕೆ ಹಾಕಿ, ನಿಮ್ಮ ಕುಟುಂಬದವರನ್ನು ಹಾಗೂ ಸಂಘದ ಪದಾಧಿಕಾರಿಗಳನ್ನು ಜೀವ ಸಹಿತ ಸುಟ್ಟು ಹಾಕುವುದಾಗಿ ಬೆದರಿಕೆ ಹಾಕಿದ್ದಾರೆ.

ಈ ಸಂಬಂಧದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಈ ಸಂಬಂಧ ಕುಲಪತಿಯವರು ನಾಪತ್ತೆಯಾಗಿ, ಪೊಲೀಸರಿಂದ ತಲೆ ಮರೆಸಿಕೊಂಡಿದ್ದಾರೆ. ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಯವರ ಭ್ರಷ್ಟಚಾರ ಎಲ್ಲೆಮೀರಿದ್ದು, ಪ್ರತಿಯೊಂದು ವಿಭಾಗದಲ್ಲೂ ಭ್ರಷ್ಟಾಚಾರ ತಾಂಡವವಾಡುತ್ತಿದೆ. 104 ಸಹಾಯಕ ಪ್ರಾಧ್ಯಾಪಕರ ನೇಮತಿಯಲ್ಲಿ ನಡೆದಿರುವ ಅಕ್ರಮದ ಬಗ್ಗೆ ಸಮಗ್ರ ತನಿಖೆ ನಡೆಸಬೇಕಾಗಿದೆ. ಈ ವಿಷಯದಲ್ಲಿ ತಕ್ಷಣ ಕ್ರಮ ಕೈಗೊಳ್ಳುವ ಅವಶ್ಯಕತೆ ಇದ್ದು ಸಾರ್ವಜನಿಕ ಮಹತ್ತರವಾದ ಈ ವಿಷಯದ ಮೇಲೆ ಸದನದಲ್ಲಿ ಚರ್ಚಿಸಲು ಅವಕಾಶ ನೀಡಬೇಕಾಗಿ ಕೋರುತ್ತೇನೆ.

*****

**ಉತ್ತರ:** ಕಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ನಿಗದಿಪಡಿಸಿದ ನೇರ ಮತ್ತು ಅಡ್ಡ ಸಮತಳ ಮೀಸಲಾತಿಗಳನ್ವಯ ಎಲ್ಲಾ ವರ್ಗದ ಅಭ್ಯರ್ಥಿಗಳಿಗೂ ಸಾಮಾಜಿಕ ನ್ಯಾಯ ಒದಗಿಸಬೇಕೆಂಬ ಉದ್ದೇಶದಿಂದ ಆಡಳಿತ ಮಂಡಳಿಯು, ಸರ್ಕಾರದ ಅನುಮೋದನೆಯನ್ನು ಪಡೆದು ತದನಂತರ ವಿಶ್ವವಿದ್ಯಾಲಯದಿಂದ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಹೊರಡಿಸಲಾಗಿರುವ ಅಧಿಸೂಚನೆಯಲ್ಲಿ ಮೀಸಲಾತಿ ಬಿಂದುಗಳಿಗೆ ಸಂಬಂಧಿಸಿದಂತೆ ರೋಸ್ಟರ್ ತಪ್ಪಾಗಿದೆ ಎಂದು ಕೆಲವು ಅಭ್ಯರ್ಥಿಗಳು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಯನ್ನು ದಾಖಲಿಸಿರುತ್ತಾರೆ.

ಇತನ್ಮಧ್ಯೆ ಸದರಿ ಮುಕ್ಕದೊಮೆಯನ್ನು ಪರಿಶೀಲಿಸಿದ ನ್ಯಾಯಾಲಯವು ದಿನಾಂಕ. 25.03.2019 ರಂದು ತಾತ್ಕಾಲಿಕವಾಗಿ ನೇಮಕಾತಿ ಅಧಿಸೂಚನೆಯ ಪ್ರಕ್ರಿಯೆಯನ್ನು ತಡೆಹಿಡಿಯುವಂತೆ ಮಧ್ಯಂತರ ಆದೇಶವನ್ನು ಹೊರಡಿಸಿತ್ತು. ಸದರಿ ಮಧ್ಯಂತರ ತಡೆಯಾಜ್ಞೆಯನ್ನು (ರಿಟ್ ಅರ್ಜಿ ಸಂಖ್ಯೆ: 9861/2019) ತೆರವುಗೊಳಿಸಿಕೊಡಬೇಕೆಂದು ಕೋರಿ ವಿಶ್ವವಿದ್ಯಾಲಯದಿಂದ ಮಾನ್ಯ ಉಚ್ಚನ್ಯಾಯಾಲಯಕ್ಕೆ ಮನವಿ ಸಲ್ಲಿಸಲಾಗಿತ್ತು.

ಸದರಿ ಮೊಕದ್ದಮೆಗೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯವು ಸಲ್ಲಿಸಿರುವ ಮನವಿಯನ್ನು ಮಾನ ಉಚ್ಚ ನ್ಯಾಯಾಲಯವು ಪರಿಗಣಿಸಿ ದಿನಾಂಕ: 24.01.2019ರ ಅಧಿಸೂಚನೆಯಂತೆ ವಿಶ್ವವಿದ್ಯಾಲಯವು ಹೊರಡಿಸಿರುವ ಅಧಿಸೂಚನೆಯ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ನೇಮಕಾತಿ ಆದೇಶ ಹೊರಡಿಸುವ ಪೂರ್ವದಲ್ಲಿ ನ್ಯಾಯಾಲಯದ ಗಮನಕ್ಕೆ ತರಲು ಸೂಚಿಸಿ ದಿನಾಂಕ: 26.02.2021 ರಂದು ಮಧ್ಯಂತರ ಆದೇಶ ನೀಡಿರುತ್ತದೆ.

ಮಾನ್ಯ ನ್ಯಾಯಾಲಯದ ಮಧ್ಯಂತರ ಆದೇಶದ ಮೇರೆಗೆ ವಿಶ್ವವಿದ್ಯಾಲಯದಿಂದ ದಿನಾಂಕ: 24.01.2019ರ ಅಧಿಸೂಚನೆಯಂತೆ ಹೊರಡಿಸಿರುವ ನೇಮಕಾತಿ ಅಧಿಸೂಚನೆಯನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ವಿಶ್ವವಿದ್ಯಾಲಯದ ನಿಯಮಾವಳಿಗಳನ್ವಯ ಸಂದರ್ಶನ ನಡೆಸಲಾಗಿರುತ್ತದೆ.

ಸದರಿ ಸಂದರ್ಶನದಲ್ಲಿ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲಾಗಿ ಮಾನ್ಯ ನ್ಯಾಯಾಲಯವು ನೇಮಕಾತಿ ಆದೇಶವನ್ನು, ಪ್ರಕರಣದ ಅಂತಿಮ ಆದೇಶದ ಷರತ್ತಿಗೊಳಪಟ್ಟು ಹೊರಡಿಸಲು ಅನುಮತಿ ನೀಡಿದ ಹಿನ್ನಲೆಯಲ್ಲಿ ದಿನಾಂಕ: 12.01.2023ರ ಉಚ್ಚ ನ್ಯಾಯಾಲಯದ ಆದೇಶದಂತೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಮುಂದುವರೆದು, ವಿಶ್ವವಿದ್ಯಾಲಯದ ಕುಲಪತಿ ಹಾಗೂ ಆಡಳಿತ ಮಂಡಳಿಯವರು ದಲಿತ ಸಂಘಟನೆಯವರಿಗೆ ಅವಾಚ್ಯವಾಗಿ ಬೈದು ಜಾತಿ ನಿಂದನೆ ಮಾಡಿ, ಜೀವ ಬೆದರಿಕೆ ಹಾಕಿ, ನಿಮ್ಮ ಕುಟುಂಬವನ್ನು ಹಾಗೂ ಸಂಘದ ಪದಾಧಿಕಾರಿಗಳನ್ನು ಜೀವ ಸಹಿತ ಸುಟ್ಟು ಹಾಕುವುದಾಗಿ ಬೆದರಿಕೆ ಹಾಕಿದ್ದಾರೆ ಎನ್ನುವ ಆರೋಪವು ಸತ್ಯಕ್ಕೆ ದೂರವಾಗಿರುತ್ತದೆ. ಹಾಗೂ ಈ ಸಂಬಂಧ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರಿನಲ್ಲಿ ಮೊಕದ್ದಮೆಯು ದಾಖಲಾಗಿದ್ದು (ಪ್ರಕರಣ ಸಂಖ್ಯೆ CRL.P: 3519/2026 ದಿನಾಂಕ 02.03.2026) ಪ್ರಕರಣವು ನ್ಯಾಯಾಲಯದ ಹಂತದಲ್ಲಿದ್ದು, ಕುಲಪತಿಯವರು ದೈನಂದಿನ ಕಛೇರಿಯ ಕಾರ್ಯಗಳನ್ನು ಎಂದಿನಂತೆ ವಿಶ್ವವಿದ್ಯಾಲಯದಲ್ಲಿಯೇ ನಿರ್ವಹಿಸುತ್ತಿದ್ದಾರೆ.

ಇ-ಸಂಖ್ಯೆ: AGRI/12/AUS/2026

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು.